ಧನಹಕ್ಕಿ ಹಾರದ ಗಿರಿಜನ ಹಾಡಿಯ ಬಗ್ಗೆ

ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

39 (79) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕಿನ ಧನಹಕ್ಕಿಹಾರದ ಗಿರಿಜನರ ಹಾಡಿಗೆ ಸಮಾಜ ಕಲ್ಯಾಣ ಇಲಾಖೆ ಸಚಿವರು ಭೇಟಿ ನೀಡಿದಾಗ ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೆ ಘೋಷಣೆ ಮಾಡಿದ ಅನುದಾನವೆಷ್ಟು ಹಾಗೂ ಯಾವ ವರ್ಷ ಮಾಡಲಾಗಿದೆ; (ವಿವರ ನೀಡುವುದು)

(ಆ) ಈ ಅನುದಾನವನ್ನು ಮೂಡಿಗೆರೆ ತಾಲ್ಲೂಕಿನ ಪರಿಶಿಷ್ಟ ಪಂಗಡದವರ ಅಭಿವೃದ್ಧಿಗಾಗಿ ಯಾವ ಯಾವ ಕಾಮಗಾರಿಗಳಿಗೆ ಹಂಚಿಕೆ ಮಾಡಲಾಗಿದೆ; (ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ಅನುದಾನ ಹಂಚಿಕೆ ಮಾಡುವ ಸಂದರ್ಭದಲ್ಲಿ ಸರ್ಕಾರಿ ಆದೇಶವನ್ನು ಪಾಲನೆ ಮಾಡಲಾಗಿದೆಯೇ; (ವಿವರ ನೀಡುವುದು)

(ಈ) ಹಂಚಿಕೆಯಾದ ಅನುದಾನಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆಯೇ; ಹಾಗಿದ್ದಲ್ಲಿ, ಯಾವ ಆಧಾರದ ಮೇಲೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ; (ವಿವರ ನೀಡುವುದು)

(ಉ) ಈ ಅನುದಾನ ಹಂಚಿಕೆ ಮಾಡುವ ಸಂದರ್ಭದಲ್ಲಿ ಜನಪ್ರತಿನಿಧಿಗಳ ಗಮನಕ್ಕೆ ತರಲಾಗಿದೆಯೇ; ಹಾಗಾದಲ್ಲಿ, ಯಾವಾಗ ತರಲಾಗಿದೆ; (ವಿವರ ನೀಡುವುದು)

(ಊ) ಬಿಡುಗಡೆಯಾದ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡಲಾಗಿದೆಯೇ? (ವಿವರ ನೀಡಿವುದು)